ಹರಾಸನ ಡಿಸ್ಟ್ರಿಕ್ಟ್.
ಇನ್ಸ್ಟಾಲ್ಮೆಂಟ್.
ತಾರೀಖು 1, ನೆ ಆಗಸ್ಟ್ 1907.

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡಿದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕೈವು ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ಮತ್ತು ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಷುರುವಾಗಿ ಉಳಿಕೆ ಯಾವದೂ ಇಲ್ಲದ ಗ್ರಾಮವು ಜಡದರಖಾಸ್ತುದಾರರಿಗೆ ಹರಾಜು ಸಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವುದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರರು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗು ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವನುಕ್ಸಾನಾಗಿ ಮರಳಿ ಹರಾಜ್ ಹಾಕಲ್ಪಡುವವು.

5. ಸರ್ತಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲೀ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜ್ ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ಬೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮಪುಕೂಫ್ ಮಾಡಲ್ಪಡತಕ್ಕದ್ದು.

6. ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿಮಾಡಿ, ಹರಾಜನ್ನು ಡೆಪ್ಯೂಟಿ ಕಮಿಷನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯೂಟಿ ಕಮ್ಮಿಷನರವರಿಂದ ರುಜು ಮೊಹರು ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲಿ ಅಂದಾಜಾ ಬೀಜವರಿ ನಿಷಯದಲ್ಲಾಗಲೀ ಇರುವ ಗಲ್ಲತ್ತುಗಳಿಗೆ ಸರ್ಕಾರದವರು ಜವಾಬುದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು, ಸದರೀ ಹರಾಜಿನಿಂದ ಲುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 50 ದಿನಗಳೊಳಗಾಗಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳಿಲಿಕ್ಕೆ ಸ್ವತಂತ್ರರಿರುತ್ತಾರೆ, ಅಂತಾ ಅಪ್ಪೀಲ್‌ನಲ್ಲಿ ಆಗುವ ತೀರ್ಮಾನಕ್ಕೆ ಅಬೈರು ಹುಕುಮಿಗೆ ಸದರೀ ಕ್ರಯವು ವಳಪಟ್ಟು ಇರುತ್ತೆ.

ಡಿಸ್ಟ್ರಿಕ್ಟ್.	ತಾಲ್ಲೂಕು.	ಹೋಬ್ಳಿ.	ಗ್ರಾಮ.	ಜೋಡಿದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹಣ ಮತ್ತು ಬೀಳಿಯ ಬೆಲೆ.	ಸಾಲಿಯಾನಾ ಸರಾಸರಿ ಕಂದಾಯ ಕಿಸ್ತು ಡೆಪಾಜಿಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂತಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಹಾಸನ	ಅರಕಲಗೂಡು.	ಹಾಳ್ಯ.	ಜೋಡಿ ಬಿಟ್ಟೂರುಪುರ	ನರಸಿಂಹಪ್ಪ ವಗೈರೆ 29 ಜನ.		ಎ. ಗು.	ರೂ. ಆ.	ರೂ.	ರೂ. ಆ. ಪೈ.
					ಪರಂಪೋಕು	19 15	3 0	334	639 5 6
					ಖುಷ್ಕಿ	79 27	11 8		
					ತರಿ	130 0	486 0		ಮತ್ತು ನೊಟೀಸು ಫೀ ಬಡ್ಡಿ ವಗೈರೆ.
					ಬಾಗಾಯಿತು	1 18	4 0		
					ಜಮ್ಲಾ	407 20	504 8		

1907ನೆ ಇಸವಿ ಫೆಬ್ರುವರಿ 11 ನೆ ತಾರೀಖು ಬೆಳಿಗ್ಗೆ 11 ಘಂಟೆಗೆ ಹಾಸನದ ಡಿಸ್ಟ್ರಿಕ್ಟ್ ಬೈಲಿಫ್ ಆಫೀಸಿನಲ್ಲಿ ಡೆಪ್ಯೂಟಿ ಕಮಿಷನರವರು ಯಾ ಜಿಲ್ಲಾ ಸೂಪರಿಂಟೆಂಡೆಂಟರವರಿಂದ ನೇಮಕವಾಗುವ ಅಧಿಕಾರಿಯವರಿಂದ ಹರಾಜನ್ನು ನಡಿಸತಕ್ಕದ್ದು.

ಚತುರ್ದಿಕ್ಕು.
ಪೂರ್ವಕ್ಕೆ — ಮಂಜರಾಬಾದು ತಾಲ್ಲೂಕು ಬಸವಾಪುರ.
ಪಶ್ಚಿಮಕ್ಕೆ — ಬಿಟ್ಟಿಹಳ್ಳಿ ಗಡಿ.
ಉತ್ತರಕ್ಕೆ — ಬಲ್ಲೂರು ಗಡಿ
ದಕ್ಷಿಣಕ್ಕೆ — ಜೋಡಿ ವಾಸುದೇವರಹಳ್ಳಿ ಗಡಿ.

ಷರಾ — ಜೋಡಿದಾರರುಗಳಿಂದಲಾಗಲಿ ಯಾ ಕಾಯಂಗುತ್ತಾದಾರರುಗಳಿಂದಲಾಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆ ಇದ್ದವರಿಂದಲಾಗಲಿ ಉಂಟುಮಾಡಲ್ಪಟ್ಟ ತಮಾಂ ಹಿಡುವಳಿಗಾಗಲಿ, ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗೇ ಆಗಲಿ ಸದರಿ ಹರಾಜು ವಳಪಟ್ಟು ಇರುವದಿಲ್ಲ.

ಕೆ. ಆರ್. ಶ್ರೀನಿವಾಸ ಐಯ್ಯಂಗಾರ್,
ಡೆಪ್ಯೂಟಿ ಕಮಿಷನರ್.